ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತನೆಯ ಅಧಿವೇಶನ

ಶುಕ್ರವಾರ, ದಿನಾಂಕ : 13 ನೇ ಮಾರ್ಚ್, 2020

2018 ರಿಂದ 2019-20ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾದ ಕಾಮಗಾರಿಗಳ ಬಗ್ಗೆ

ಶ್ರೀ ಐವನ್ ಡಿ'ಸೋಜಾ(ನಾಮನಿರ್ದೇಶನ ಹೊಂದಿದವರು):-

851 (913) ಮಾನ್ಯ ಪ್ರವಾಸೋದ್ಯಮ, ಕನ್ನಡ ಮತ್ತು ಸಂಸ್ಕೃತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) 2018-19 ಮತ್ತು 2019-20ನೇ ಸಾಲಿನಲ್ಲಿ ಪ್ರವಾಸೋದ್ಯಮ ಇಲಾಖೆಯಿಂದ ಮಂಜೂರಾದ; ಅನುಷ್ಠಾನಗೊಂಡ ಹಾಗೂ ಪ್ರಗತಿಯಲ್ಲಿರುವ ಕಾಮಗಾರಿಗಳೆಷ್ಟು;

(ಆ) ಪ್ರವಾಸೋದ್ಯಮ ಇಲಾಖೆಯಿಂದ ರಾಜ್ಯದಲ್ಲಿ ಕಾರ್ಯ ನಿರ್ವಹಿಸುತ್ತಿರುವ `ಯಾತ್ರಿ' ಭವನಗಳ ನಿರ್ವಹಣೆಯನ್ನು ಇಲಾಖೆಯಿಂದ ನಿರ್ವಹಿಸಲಾಗುತ್ತಿದೆಯೇ ; ಇದರಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ; (ವಿವರ ನೀಡುವುದು)

(ಇ) ಪ್ರವಾಸೋದ್ಯಮ ಇಲಾಖೆಯಿಂದ ಕಾರ್ಯನಿರ್ವಹಿಸುತ್ತಿರುವ ವಿವಿಧ ನಿಗಮ ಮಂಡಳಿಗಳು ಲಾಭದಲ್ಲಿ ಇವೆಯೇ ; ಇಲ್ಲದಿದ್ದಲ್ಲಿ, ಇವುಗಳ ಪುನಃಶ್ಚೇತನಕ್ಕೆ ಕೈಗೊಂಡಿರುವ ಕ್ರಮಗಳೇನು ; (ವಿವರ ನೀಡುವುದು)

(ಈ) ಪ್ರವಾಸೋದ್ಯಮ ಇಲಾಖೆಯ ಕಾಮಗಾರಿಗಳು ಕಳಪೆ ಮಟ್ಟದಲ್ಲಿ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಾಮಗಾರಿ ನಿರ್ವಹಿಸುವ ಏಜೆನ್ಸಿಗಳ ವಿವರ ನೀಡುವುದು ?